ವಿಷಯ:- ವರ್ಗಾವಣೆ ನೀತಿಯಂತೆ ಪತಿ–ಪತ್ನಿ ಒಂದೆಡೆ ಕೆಲಸ ನಿರ್ವಹಿಸುವ ವಿಷಯ.

1261 (1608) **ಶ್ರೀಮತಿ ಬಿ.ಟಿ. ಲಲಿತಾನಾಯಕ್ (ದೇವದುರ್ಗ):-** ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ವರ್ಗಾವಣೆ ನೀತಿಯಂತೆ ಪತಿ–ಪತ್ನಿ ಒಂದೆಡೆ ಕೆಲಸ ನಿರ್ವಹಿಸುವ ವಿಷಯದಲ್ಲಿ ಸರ್ಕಾರದ ಆದೇಶ ಇದ್ದರೂ ಸಹ ಅದರ ಸಮರ್ಪಕ ಅನುಷ್ಠಾನ ಆಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಆದೇಶದ ಸದುದ್ದೇಶವಾದರೂ ಏನು?

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯ ಮಂತ್ರಿಗಳು):-

ಅ) ಇಲ್ಲ.

ಆ) ಪತಿ, ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಒಂದೇ ಸ್ಥಳದಲ್ಲಿ ಅಥವಾ ಹತ್ತಿರದ ಸ್ಥಳದಲ್ಲಿ ಕೆಲಸ ನಿರ್ವಹಿಸುವಂತೆ ಮಾಡುವುದು ಸರ್ಕಾರದ ನೀತಿಯಾಗಿದೆ.

ವಿಷಯ:- 1995-96ನೇ ಸಾಲಿನ ಏತ ನೀರಾವರಿ ಯೋಜನೆ.

1272 (1840) **ಶ್ರೀ ಜೆ.ಟಿ. ಪಾಟೀಲ (ಬೀಳಗಿ):-** ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1995–96ನೇ ಸಾಲಿನಲ್ಲಿ ಎಷ್ಟು ಏತ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ? (ಹಳೆಯ ಯೋಜನೆಗಳ ಜಿಲ್ಲಾವಾರು ವಿವರ ನೀಡುವುದು)

ಆ) ಅಡಿಹುಡಿ ತೊದಲಬಾಗಿ ಏತ ನೀರಾವರಿ ಯೋಜನೆ ಯಾವ ಹಂತದಲ್ಲಿದೆ, ಇದನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಇ) 1996–97ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ ಎಷ್ಟು ನೀರಾವರಿ ಯೋಜನೆಗಳನ್ನು ಪ್ರಾರಂಭಿಸಲಾಗುವುದು, ಈಗಾಗಲೇ ಬೀಳಗಿ ತಾಲ್ಲೂಕಿನ ಗಿರಿಸಾಗರ ಏತ ನೀರಾವರಿ ಯೋಜನೆ ಸಲುವಾಗಿ ಬಜೆಟ್‌ನಲ್ಲಿ ಹಣ ತೆಗೆದಿರಿಸಿದ್ದು, ಇದನ್ನು 1996–97ನೇ ಸಾಲಿನಲ್ಲಿ ಕೆಲಸ ಪ್ರಾರಂಭಿಸಲಾಗುವುದೇ?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):-

ಅ) 1995–96ನೇ ಸಾಲಿನಲ್ಲಿ ಯಾವ ಏತ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಂಡಿರುವುದಿಲ್ಲ. ಪ್ರಗತಿಯಲ್ಲಿರುವ ಯೋಜನೆಗಳು ಒಟ್ಟು 154. ಜಿಲ್ಲಾವಾರು ವಿವರಗಳು ಈ ಕೆಳಗಿನಂತಿವೆ.

ಬೆಂಗಳೂರು	:	8
ಶಿವಮೊಗ್ಗ	:	4
ಮೈಸೂರು	:	8